## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 01 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 318 |
| 02 | ಸದಸ್ಯರ ಹೆಸರು | : ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 03 | ಉತ್ತರಿಸುವ ದಿನಾಂಕ | : 06.03.2025 |
| 04 | ಉತ್ತರಿಸುವ ಸಚಿವರು | : ಮಾನ್ಯ ಗೃಹ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಅದರಲ್ಲೂ ವಿಶೇಷವಾಗಿ ಬೆಂಗಳೂರಿನಲ್ಲಿ ವಿಧ್ಯಾಭ್ಯಾಸಕ್ಕಾಗಿ ಅಥವಾ ಇನ್ನಿತರೆ ಉದ್ದೇಶಗಳಿಗಾಗಿ ವಿದೇಶಗಳಿಂದ ಬಂದಿರುವ ವಿದೇಶಿಯರು ಅವರ ವೀಸಾ ಅವಧಿ ಮುಗಿದಿದ್ದರೂ ಸಹ ಅನಧಿಕೃತವಾಗಿ ರಾಜ್ಯದಲ್ಲಿ ನೆಲೆಸಿ ಸ್ಥಳೀಯ ಕಾನೂನನ್ನು ಉಲ್ಲಂಘಿಸಿ ಶಾಂತಿ ಸುವ್ಯವಸ್ಥೆಗೆ ಭಂಗ ತಂದು ಗಲಭೆಗಳನ್ನು ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ವೀಸಾ ಅವಧಿ ಮುಗಿದಿದ್ದರೂ ಸಹ ಅನಧಿಕೃತವಾಗಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಗರ ಮೇಲೆ ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ಏನು ಕ್ರಮ ಕೈಗೊಂಡಿದೆ ಮತ್ತು ಈ ರೀತಿ ಕಾನೂನು ಬಾಹಿರವಾಗಿ ಯಾವ ದೇಶದ ವಿದೇಶಿಯರು ಹೆಚ್ಚಾಗಿ ನೆಲೆಸಿದ್ದಾರೆ: (ಮಾಹಿತಿ ನೀಡುವುದು)</td><td>ಹೌದು<br><br>ಬೆಂಗಳೂರು ನಗರದಲ್ಲಿ ವೀಸಾ ಅವಧಿ ಮುಗಿದ ನಂತರವೂ ಅಕ್ರಮವಾಗಿ ನೆಲೆಸಿರುವ ಪತ್ತೆಯಾದ ವಿದೇಶಿಯರ ವಿರುದ್ಧ ಕಳೆದ ಮೂರು ವರ್ಷಗಳಲ್ಲಿ ಈ ಕೆಳಕಂಡಂತೆ ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ:-
<table>
<tr><th>ವರ್ಷ</th><th>ಅವಧಿ ಮೀರಿ ವಾಸವಾಗಿರುವ ವಿದೇಶಿಯರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ</th><th>ಅವಧಿ ಮೀರಿ ವಾಸವಾಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿರುವವರ ಸಂಖ್ಯೆ</th></tr>
<tr><td>2023</td><td>54</td><td>81</td></tr>
<tr><td>2024</td><td>29</td><td>46</td></tr>
<tr><td>2025</td><td>00</td><td>00</td></tr>
<tr><td>ಒಟ್ಟು</td><td>83</td><td>127</td></tr>
</table>
ಬೆಂಗಳೂರು ನಗರದಲ್ಲಿ ಅವಧಿ ಮೀರಿ ವಾಸವಾಗಿರುವ ವಿದೇಶಿ ಪ್ರಜೆಗಳು ಪತ್ತೆಯಾದಲ್ಲಿ ಅಂತಹ ಆರೋಪಿಗಳನ್ನು ಅವರ ದೇಶದ ವಿದೇಶಿ ಮಂತ್ರಾಲಯದ ಮೂಲಕ ಆಯಾ ದೇಶಗಳಿಗೆ ವಾಪಸ್ಸು ಕಳುಹಿಸುತ್ತಿದ್ದು, ವಿದೇಶಾಂಗ ವ್ಯವಹಾರಗಳ ಸಚಿವಾಲಯಕ್ಕೆ (Ministry of External Affairs)ಗೆ ಮಾಹಿತಿಯನ್ನು ನೀಡಲಾಗುತ್ತಿದೆ ಹಾಗೂ ವಿವಿಧ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವ ವಿದೇಶಿ ಪ್ರಜೆಗಳ ವಿರುದ್ಧ ಪ್ರಕರಣ ದಾಖಲಿಸಿ ಮಾನ್ಯ ನ್ಯಾಯಾಲಯದಲ್ಲಿ ಇತ್ಯರ್ಥವಾಗುವವರೆಗೂ ಸಂಬಂಧಪಟ್ಟ ಇಲಾಖೆಯಿಂದ ನಿರ್ಗಮನ ಪರವಾನಗಿ (Exit Permit) ಯನ್ನು ಪಡೆಯುವವರೆಗೆ, ಸದರಿಯರುಗಳನ್ನು ಫಾರಿನರ್ಸ್ ರಿಸ್ಟ್ರಿಕ್ಷನ್ ಸೆಂಟರ್‌ನಲ್ಲಿ (FRC) ಇರಿಸಿ, ಪ್ರಕರಣ ಇತ್ಯರ್ಥವಾದ ನಂತರ ಸದರಿ ವಿದೇಶಿ ಪ್ರಜೆಯ ಗಡಿಪಾರು ನಿಯಮವನ್ನು ಪಾಲಿಸಲಾಗುತ್ತಿದೆ.<br>ಬೆಂಗಳೂರು ನಗರದಲ್ಲಿ ವೀಸಾ ಅವಧಿ ಮುಗಿದ ನಂತರವೂ ಕೂಡ ನೆಲೆಸಿರುವ ವಿದೇಶಿ ಪ್ರಜೆಗಳನ್ನು ವಿಭಾಗೀಯ ಪೊಲೀಸ್</td></tr>
</table>

<table>
<tr>
<td></td>
<td></td>
<td>ಉಪ ಆಯುಕ್ತರುಗಳಿಗೆ ಪತ್ತೆ ಮಾಡಿ ಕ್ರಮ ಕೈಗೊಳ್ಳುವಂತೆಯೂ ಹಾಗೂ ಪತ್ತೆ ಮಾಡಲು ಠಾಣೆಗಳಿಂದ ನುರಿತ ಅಧಿಕಾರಿ ಮತ್ತು ಸಿಬ್ಬಂದಿಯವರುಗಳ ತಂಡ ನೇಮಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.<br>ಕಳೆದ ಮೂರು ವರ್ಷಗಳಲ್ಲಿ ಅವಧಿ ಮೀರಿ ವಾಸವಾಗಿದ್ದ ವಿದೇಶಿಯರನ್ನು ಗಡಿಪಾರು ಮಾಡಲಾಗಿರುವ ವಿವರ ಈ ಕೆಳಕಂಡಂತೆ ಇರುತ್ತದೆ.
<table>
<tr><th>ವರ್ಷ</th><th>ಅವಧಿಮೀರಿ ವಾಸವಾಗಿರುವ ವಿದೇಶಿಯರನ್ನು ಗಡಿಪಾರು ಮಾಡಲಾಗಿರುವ ವಿವರ</th></tr>
<tr><td>2022</td><td>6</td></tr>
<tr><td>2023</td><td>116</td></tr>
<tr><td>2024</td><td>182</td></tr>
<tr><td>ಒಟ್ಟು</td><td>304</td></tr>
</table>
ಕಾನೂನು ಬಾಹಿರವಾಗಿ ನೈಜೀರಿಯಾ, ಸೂಡಾನ್, ಯೆಮನ್, ಕಾಂಗೋ ಹಾಗೂ ಇತರೆ ವಿದೇಶಿಯರು ಹೆಚ್ಚಾಗಿ ನೆಲೆಸಿರುತ್ತಾರೆ.</td>
</tr>
<tr>
<td>ಆ)</td>
<td>ಬೆಂಗಳೂರಿನಲ್ಲಿ ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಜಾಲ ಬಹುದೊಡ್ಡದಾಗಿ ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಈ ಹಾವಳಿಯನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳೇನು:</td>
<td>ಬೆಂಗಳೂರಿನಲ್ಲಿ ಡ್ರಗ್ಸ್ ಮತ್ತು ಮಾದಕ ವಸ್ತು ಮಾರಾಟ ಮತ್ತು ಸೇವನೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಈ ಕೆಳಕಂಡ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಯುವಕರು ಸೇರುವ ಪ್ರಮುಖ ಸಾರ್ವಜನಿಕ ಸ್ಥಳಗಳು, ಜನಸಂದಣಿ ಪ್ರದೇಶಗಳು ಹಾಗೂ ಪ್ರಮುಖ ವ್ಯಕ್ತಿಗಳು ವಾಸಿಸುತ್ತಿರುವ ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಂಡು ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಅಲ್ಲದೆ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್ ಬೀಟ್‌ಗಳಲ್ಲಿ ಆಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.<br>➢ ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ 1908 ಕ್ಕೆ ಸಂಪರ್ಕಿಸಿ ಪೊಲೀಸರಿಗೆ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.<br>➢ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಡ್ರಗ್ಸ್ ಅವೇರ್‌ನೆಸ್ ಪ್ರೋಗ್ರಾಂನ್ನು ನಡೆಸಿ, ಉಪನ್ಯಾಸ, ದೃಶ್ಯ ರೂಪಕಗಳ ಮೂಲಕ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಶಾಲಾ–ಕಾಲೇಜುಗಳ ಹತ್ತಿರ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾದಕ ವಸ್ತುಗಳನ್ನು</td>
</tr>
</table>

| | | |
|---|---|---|
| | | ಮಾರಾಟ ಮಾಡುತ್ತಿರುವ ಹಾಗೂ ಮಾದಕ ವಸ್ತು ಸೇವನೆ ಮಾಡುವವರ ವಿರುದ್ಧ ತ್ವರಿತವಾಗಿ ಕಠಿಣ ಕ್ರಮಕೈಗೊಳ್ಳಲಾಗಿದೆ.<br>➢ ಯುವ ಜನತೆ ಹೆಚ್ಚಾಗಿ ಸೇರುವ ಪ್ರತಿಷ್ಠಿತ ಹೊಟೇಲ್, ಪಬ್ ಇತ್ಯಾದಿಗಳಲ್ಲಿ ರಾತ್ರಿ ಪಾರ್ಟಿಗಳನ್ನು ಆಯೋಜಿಸಿ ಅಲ್ಲಿಗೆ ಬರುತ್ತಿದ್ದ ಪ್ರತಿಷ್ಠಿತರಿಗೆ ಹಾಗೂ ಸೆಲೆಬ್ರಿಟಿಗಳಿಗೆ ಮಾದಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದ ವ್ಯವಸ್ಥಿತ ಜಾಲವನ್ನು ಪತ್ತೆ ಮಾಡಿ ಅವರನ್ನು ದಸ್ತಗಿರಿ ಮಾಡಿ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.<br>➢ ಜನರು ಹೆಚ್ಚಾಗಿ ಸೇರುವ ಸ್ಥಳಗಳಾದ ಬಾರ್ ಮತ್ತು ರೆಸ್ಟೋರೆಂಟ್, ಪಬ್, ಡ್ಯಾನ್ಸ್ ಬಾರ್, ಶಾಲಾ–ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತಿದೆ. ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ವಿದ್ಯುನ್ಮಾನ ಜಾಗೃತಿ ಫಲಕಗಳು ಹಾಗೂ ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ, ಜೊತೆಗೆ ಕಿರುಚಿತ್ರಗಳ ಮೂಲಕ ಅರಿವು ಮೂಡಿಸುವ ಕಾರ್ಯ ಮಾಡಲಾಗುತ್ತಿದೆ.<br>➢ ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಎಲ್ಲಾ ಕಡೆ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು ಹಾಗೂ ಪತ್ತೆ ಮಾಡಲು, ಹದಿಯರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಸಾಧ್ಯವಿರುವ ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡಲಾಗುತ್ತಿದೆ.<br>➢ ನಗರಕ್ಕೆ ಮಾದಕ ವಸ್ತುಗಳು ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ. ಡಾರ್ಕ್ ನೆಟ್ (DARKNET) ಮುಖಾಂತರ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮಕೈಗೊಳ್ಳಲಾಗಿರುತ್ತದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್/ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ.<br>➢ ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್. ಪ್ರಕರಣಗಳಲ್ಲಿ ಭಾಗಿಯಾದ ಅಥವಾ ಹವ್ಯಾಸಿ ಆರೋಪಿತರಿಗೆ PIT-NDPS ಕಾಯ್ದೆ ಅಡಿಯಲ್ಲಿ 13 ಜನರನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.<br>➢ ನಗರದಲ್ಲಿ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, CUSTOMS, RAILWAY, EDUCATION ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ. |

| | | |
|---|---|---|
| | | ➢ ವಿದೇಶಿಯರು ವಿಶೇಷವಾಗಿ ನೈಜೀರಿಯನ್ ಪ್ರಜೆಗಳು ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿವೆ ಎಂಬುವುದರ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಸದರಿಯವರ ಗಡಿಪಾರಿಗೆ ಕ್ರಮಕೈಗೊಳ್ಳಲಾಗುತ್ತಿದೆ. ಅಂತಹವರ ವಿರುದ್ಧ ವಿಶೇಷ ಕಾರ್ಯಚರಣೆಗಳನ್ನು ನಡೆಸಿ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗಿದೆ.<br>➢ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ, ಠಾಣಾ ಮಟ್ಟದಲ್ಲಿ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಮಾದಕದ್ರವ್ಯ (ಡ್ರಗ್ಸ್) ಹಾವಳಿಯನ್ನು ತಡೆಗಟ್ಟಲು ಸೂಕ್ತ ನಿಗಾವಹಿಸಿ ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಈ ಬಗ್ಗೆ ಬಾತ್ಮಿದಾರರಿಗೂ ಸಹ ಮಾಹಿತಿಯನ್ನು ನೀಡುವಂತೆ ಸೂಚಿಸಲಾಗಿರುತ್ತದೆ. ಅಧಿಕಾರಿ ಸಿಬ್ಬಂದಿಗಳಿಗೆ ಮಾದಕ ದ್ರವ್ಯ (ಡ್ರಗ್ಸ್) ಗಳ ಮಾರಾಟ ಮತ್ತು ಮಾದಕ ದ್ರವ್ಯ ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸುವಂತೆ ಸೂಕ್ತ ತಿಳುವಳಿಕೆ ನೀಡಿ ಕರ್ತವ್ಯಕ್ಕೆ ನೇಮಕ ಮಾಡಲಾಗುತ್ತಿದೆ.<br>➢ ಮಾದಕ ವಸ್ತುಗಳನ್ನು ಬೆಳೆಯುವ ಪ್ರದೇಶ ಮತ್ತು ಸಿಂಥೆಟಿಕ್ ಡ್ರಗ್ಸ್‌ಳನ್ನು ತಯಾರಿಸುವ ಲ್ಯಾಬ್‌ಗಳ ಹಾಗೂ ಸಂಗ್ರಹಿಸಿಟ್ಟಿದ್ದ ಸಂಗ್ರಹಗಾರಗಳ ಮೇಲೆ ದಾಳಿ ಮಾಡಿ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಬೆಂಗಳೂರಿನಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ ಆರೋಪಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಗಳನ್ನು ಅನುಸರಿಸಿ ಓಆಖ (ಅಊಂಕಖಇಖ-ಗಿ) ರಡಿಯಲ್ಲಿ 4 ಡ್ರಗ್ಸ್ ಪೆಡ್ಲರ್‌ಗಳ ಸ್ಥಿರಾಸ್ತಿ/ಚರಾಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ. NDPS Chapter-V<br>➢ ಬೆಂಗಳೂರು ನಗರದಾದ್ಯಂತ ಮಾದಕ ವಸ್ತುಗಳ ಮಾರಾಟ ಮತ್ತು ಸೇವನೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ 2024 ನೇ ಸಾಲಿನಲ್ಲಿ ಪೊಲೀಸ್ ಆಯುಕ್ತರನ್ನೊಳಗೊಂಡಂತೆ ಒಟ್ಟು 5,613 ಪೊಲೀಸ್ ಅಧಿಕಾರಿಗಳು ಸುಮಾರು 4,430 ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ 6,06,198 ಶಾಲಾ/ಕಾಲೇಜು ಹಾಗೂ ಹಾಸ್ಟೆಲ್ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿನಿಯರುಗಳಿಗೆ ಮತ್ತು 2025 ನೇ 446 ಪೊಲೀಸ್ ಅಧಿಕಾರಿಗಳು ಸುಮಾರು 347 ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ 3,816 ಶಾಲಾ/ಕಾಲೇಜು ಹಾಗೂ ಹಾಸ್ಟೆಲ್ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿನಿಯರುಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸಲಾಯಿತು.<br>➢ ಸುಮಾರು 2519 ವಿದ್ಯಾರ್ಥಿಗಳನ್ನೊಳಗೊಂಡ |

| | | |
|---|---|---|
| | | ಮಾರ್ಷಲ್‌ಗಳನ್ನು ನೇಮಕ ಮಾಡಿಕೊಂಡು ಅವರ ಮೂಲಕ ಮಾದಕ ವಸ್ತುಗಳ ಬಗ್ಗೆ ಜಾಗೃತಿ ಮೂಡಿಸಲಾಗಿರುತ್ತದೆ. |
| ಇ) | ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರಿನಲ್ಲಿ ಎಷ್ಟು ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಮಾರಾಟಗಾರರನ್ನು ಬಂಧಿಸಲಾಗಿದೆ ಮತ್ತು ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ? (ವಿವರ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರಿನಲ್ಲಿ ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಮಾರಾಟಗಾರರನ್ನು ಬಂಧಿಸಿರುವ ಮತ್ತು ಪ್ರಕರಣಗಳನ್ನು ದಾಖಲಿಸಿರುವ ಅಂಕಿ-ಅಂಶಗಳು ಈ ಕೆಳಕಂಡಂತಿರುತ್ತದೆ:- |

| ವರ್ಷ | ನಗರ ಮತ್ತು ಜಿಲ್ಲೆ | ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಮಾರಾಟದ ಕುರಿತು ದಾಖಲಾದ ಪ್ರಕರಣಗಳ ಸಂಖ್ಯೆ | ಬಂಧಿಸಲಾಗಿರುವ ಡ್ರಗ್ಸ್ ಮತ್ತು ಮಾದಕ ದ್ರವ್ಯಗಳ ಮಾರಾಟಗಾರರ ಸಂಖ್ಯೆ |
|---|---|---|---|
| 2022 | ಬೆಂಗಳೂರು ನಗರ | 579 | 974 |
| | ಬೆಂಗಳೂರು ಜಿಲ್ಲೆ | 84 | 125 |
| 2023 | ಬೆಂಗಳೂರು ನಗರ | 677 | 984 |
| | ಬೆಂಗಳೂರು ಜಿಲ್ಲೆ | 97 | 138 |
| 2024 | ಬೆಂಗಳೂರು ನಗರ | 482 | 675 |
| | ಬೆಂಗಳೂರು ಜಿಲ್ಲೆ | 40 | 65 |
| 2025 (31.01.25) | ಬೆಂಗಳೂರ ನಗರ | 24 | 31 |
| | ಬೆಂಗಳೂರು ಜಿಲ್ಲೆ | 08 | 10 |
| | **ಒಟ್ಟು** | **1991** | **3002** |

ಸಂಖ್ಯೆ: 102 ಪಿಎಂಎಸ್ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು